# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 239 |
| 2) | ಸದಸ್ಯರ ಹೆಸರು | ಶ್ರೀ ಕೆ.ಪ್ರತಾಪ್‌ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 11/07/2018 |
| 4) | ಉತ್ತರಿಸುವವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪಿ.ಎಸ್.ಥಾಮಸ್ ವರದಿಯ ಶಿಫಾರಸ್ಸಿನ ಅನ್ವಯ ಖಾಸಗಿ ಅನುದಾನಿತ ಐಟಿಐ ನೌಕರರಿಗೆ ಇತರೇ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೌಕರರಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ? ನೀಡಲಾಗುತ್ತಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ: ಇಲ್ಲವಾದಲ್ಲಿ ಕಾರಣವೇನು: (ಪಿ.ಎಸ್.ಎಸ್. ವರದಿಯ ಪ್ರತಿ ಒದಗಿಸುವುದು) | ಹೌದು. ರಾಜ್ಯದಲ್ಲಿ ಪಿ.ಎಸ್.ಥಾಮಸ್ ವರದಿಯ ಶಿಫಾರಸ್ಸಿನ ಅನ್ವಯ ಖಾಸಗಿ ಅನುದಾನಿತ ಐಟಿಐ ನೌಕರರಿಗೆ ಇತರೇ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೌಕರರಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಪಿಂಚಣಿ, ಗ್ರ್ಯಾಚ್ಯುಯಿಟಿ, 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿ, 15, 20, 25 ವರ್ಷಗಳ ಒಂದು ಹೆಚ್ಚುವರಿ ವೇತನ ಬಡ್ತಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ನಿವೃತ್ತ ಸಿಬ್ಬಂದಿಯವರಿಗೆ ಗಳಿಕೆ ರಜೆ ನಗದೀಕರಣ ಸೌಲಭ್ಯ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. |
| ಆ) | ರಾಜ್ಯದ ಎಷ್ಟು ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳ ನೌಕರರಿಗೆ 20 ವರ್ಷಗಳ ಕಾಲಮಿತಿ ವೇತನ, ಬಡ್ತಿ ನೀಡಲಾಗಿದೆ: ನೀಡದಿದ್ದಲ್ಲಿ, ಕಾರಣವೇನು: ಮತ್ತು 20 ವರ್ಷದ ಕಾಲಮಿತಿ ವೇತನ ಬಡ್ತಿ ನೀಡಲು ತೆಗೆದುಕೊಳ್ಳುವ ಕ್ರಮಗಳೇನು: | ರಾಜ್ಯದಲ್ಲಿನ 196 ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳಿಂದ ಕಾಲಕಾಲಕ್ಕೆ ಸ್ವೀಕೃತವಾದ ಪ್ರಸ್ತಾವನೆಗಳಂತೆ ಅರ್ಹ ನೌಕರರಿಗೆ 20 ವರ್ಷಗಳ ಕಾಲಮಿತಿ ವೇತನ ಬಡ್ತಿಗಳನ್ನು ನೀಡಲಾಗುತ್ತಿದೆ. |
| ಇ) | ರಾಜ್ಯದಲ್ಲಿ ಪಿ.ಎಸ್.ಥಾಮಸ್ ವರದಿಯ ಶಿಫಾರಸ್ಸಿಗೆ ಪೂರಕವಾಗಿ ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳಿಗೆ ಪರಿಷ್ಕೃತ ಅನುದಾನ ನೀತಿ ಸಂಹಿತೆ ಸಿದ್ಧಪಡಿಸಲಾಗಿದೆಯೇ: ಸಿದ್ಧಪಡಿಸಲಾಗಿದ್ದಲ್ಲಿ ಇದನ್ನು ಯಾವಾಗ ಜಾರಿಗೆ ತರಲಾಗುವುದು: ಇಲ್ಲವಾದಲ್ಲಿ ಕಾರಣವೇನು: ಹಾಗೂ ಹಿಂದಿನ ಸರ್ಕಾರ ಘೋಷಣೆ ಮಾಡಿರುವ 6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ಖಾಸಗಿ ಐಟಿಐ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ಪರಿಷ್ಕೃತ ವೇತನ ನೀಡಲು ಕ್ರಮ ಕೈಗೊಳ್ಳಲಾಗುವುದೇ: ಇಲ್ಲವಾದಲ್ಲಿ ಕಾರಣವೇನು? | ರಾಜ್ಯದಲ್ಲಿ ಪಿ.ಎಸ್.ಥಾಮಸ್ ವರದಿಯ ಶಿಫಾರಸ್ಸಿಗೆ ಪೂರಕವಾಗಿ ಅನುದಾನಿತ ಐಟಿಐ ಶಿಕ್ಷಣ ಸಂಸ್ಥೆಗಳಿಗೆ ಪರಿಷ್ಕೃತ ಅನುದಾನ ನೀತಿ ಸಂಹಿತೆಯನ್ನು ಜಾರಿಗೆ ತರಲು ಪರಿಶೀಲಿಸಲಾಗುತ್ತಿದೆ.<br><br>6 ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ಖಾಸಗಿ ಐಟಿಐ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೂ ಪರಿಷ್ಕೃತ ವೇತನ ನೀಡಲು ಸರ್ಕಾರಿ ಆದೇಶ ಸಂಖ್ಯೆ: ಆಇ 06 ಎಸ್.ಆರ್.ಪಿ 2018 ದಿನಾಂಕ:01.03.2018 ಮತ್ತು 19.04.2018 ರಂತೆ ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಕೌಉಜೀಇ 45 ಕೈತಪ್ರ 2018

(ಆರ್.ವಿ. ದೇಶಪಾಂಡೆ)
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು